JULY 04, 2025

AKASHAVANI - DHARWAD

PRADESH SAMACHARA (KANNADA) 12.00 P.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೇವನಹಳ್ಳಿ ತಾಲೂಕು, ಆವತಿಯ ಗೊಬ್ಬರಗುಂಟೆ ಗ್ರಾಮದ ಬಳಿ, ನಾಡಪ್ರಭು ಶ್ರೀ ಕೆಂಪೇಗೌಡರ ವಸ್ತು ಸಂಗ್ರಹಾಲಯ ನಿರ್ಮಾಣಕ್ಕಾಗಿ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್. ಮುನಿಯಪ್ಪ ಸ್ಥಳ ಪರಿಶೀಲನೆ ನಡೆಸಿದರು. ಡಿ.ಕೆ. ಶಿವಕುಮಾರ ಮಾಹಿತಿ ನೀಡಿ, ನಾಡಪ್ರಭು ಕೆಂಪೇಗೌಡರ ಮೂಲಸ್ಥಳವಾದ ಆವತಿ ಗ್ರಾಮದ ಬಳಿ, 9 ಎಕರೆ 10 ಗುಂಟೆ ಪ್ರದೇಶದಲ್ಲಿ, ಕೆಂಪೇಗೌಡರ ಜೀವನ, ಹೋರಾಟ, ಸಮಾಜ ಸೇವೆಯ ಇತಿಹಾಸವನ್ನು, ಮುಂದಿನ ಪೀಳಿಗೆಗೆ ತಿಳಿಸಲು ವಸ್ತು ಸಂಗ್ರಾಲಯ ನಿರ್ಮಿಸಲಾಗುವುದು ಎಂದರು.

<><><>

ಧಾರವಾಡ, ಕರ್ನಾಟಕ ವಿಶ್ವವಿದ್ಯಾಲಯದ ಪ್ರಾಣಿಶಾಸ್ತ್ರ ವಿಭಾಗ, ಎರಡು ದಿನಗಳ ರಾಷ್ಟ್ರೀಯ ವಿಚಾರ ಸಂಕಿರಣವನ್ನು, ಆಯೋಜಿಸಿದೆ. ವಿಶ್ವವಿದ್ಯಾಲಯದ ಪ್ರಾದೇಶಿಕ ವಿಜ್ಞಾನ ಕೇಂದ್ರದ ಸಭಾಂಗಣದಲ್ಲಿ ಆರಂಭಗೊಂಡಿರುವ, 'ಪ್ರಾಣಿಶಾಸ್ತ್ರ ವಿಜ್ಞಾನ ಕ್ಷೇತ್ರದಲ್ಲಿನ ಇತ್ತೀಚಿನ ಬೆಳವಣಿಗೆಗಳು', ವಿಚಾರ ಸಂಕಿರಣದ ಬಗ್ಗೆ, ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಕರ್ನಾಟಕ ವಿಶ್ವವಿದ್ಯಾಲಯ ಪ್ರಾಣಿಶಾಸ್ತ್ರ ಸ್ನಾತಕೋತ್ತರ ವಿಭಾಗದ ಮುಖ್ಯಸ್ಥ, ಪ್ರೊಫೆಸರ ಗಿರೀಶ ಕಾಡದೇವರು,

<><><>

ಧ್ವನಿ: ಗಿರೀಶ ಕಾಡದೇವರು 37 ಸೆಕೆಂದುಗಳು

<><><>

ಇಂದು, ಭಾರತದ ಆಧ್ಯಾತ್ಮಿಕ ಚಿಂತಕ ಹಾಗೂ ತತ್ವಜ್ಞಾನಿ ಸ್ವಾಮಿ ವಿವೇಕಾನಂದರ ಪುಣ್ಯ ತಿಥಿ. ಈ ದಿನದಂದು, ಸ್ವಾಮಿ ವಿವೇಕಾನಂದರ ಕೊಡುಗೆಗಳನ್ನು ಸ್ಮರಿಸಿರುವ ಕೇಂದ್ರ ನವ ಮತ್ತು ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ಅವರು, ವಿವೇಕಾನಂದರ ಆಲೋಚನೆಗಳು ಹಾಗೂ ಆದರ್ಶಗಳು, ರಾಷ್ಟ್ರಕ್ಕೆ ಸದಾ ಮಾರ್ಗದರ್ಶಿ ಹಾಗೂ ಯುವ ಜನಾಂಗಕ್ಕೆ ಸ್ಪೂರ್ತಿಯಾಗಿವೆ ಎಂದಿದ್ದಾರೆ.

<><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿದ, ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷ ಟಿ.ಎ.ನಾರಾಯಣ ಗೌಡ ಅವರು, ರಾಜ್ಯದಲ್ಲಿ ದ್ವಿಭಾ ಾ ನೀತಿ ಜಾರಿ ಮಾಡುವಂತೆ ಕೋರಿ ಮನವಿಪತ್ರ ಸಲ್ಲಿಸಿದರು. ಇದೇ ವೇಳೆ ಮುಖ್ಯಮಂತ್ರಿಯವರ ಕನ್ನಡಪರ ಕಾಳಜಿಯನ್ನು ಅವರು ಅಭಿನಂದಿಸಿದರು.

<><><>

ಆಷಾಢ ಮಾಸದ ಎರಡನೇ ಶುಕ್ರವಾರವಾದ ಇಂದು, ಮೈಸೂರು ಚಾಮುಂಡಿ ಬೆಟ್ಟದ, ಶ್ರೀ ಚಾಮುಂಡೇಶ್ವರಿ ಕ್ಷೇತ್ರಕ್ಕೆ ಹೆಚ್ಚಿನ ಸಂಖ್ಯೆಯ ಭಕ್ತಾದಿಗಳು ಆಗಮಿಸಿದ್ದು, ಶ್ರೀ ದೇವಿಯ ದರ್ಶನ ಪಡೆಯುತ್ತಿದ್ದಾರೆ. ಇಂದು ಮುಂಜಾನೆ ಶ್ರೀ ದೇವಿಗೆ ವಿಶೇಷ ಪೂಜಾ ಸೇವೆಗಳು ಜರುಗಿದವು. ಚಾಮುಂಡಿ ಬೆಟ್ಟಕ್ಕೆ ತೆರಳುವ ಭಕ್ತಾದಿಗಳಿಗೆ ಉಚಿತ ಬಸ್ ಸೇವೆ ಕಲ್ಪಿಸಲಾಯಿತು.

<><><>

ಭಾರತೀಯ ಮಾದಕ ದ್ರವ್ಯ ನಿಯಂತ್ರಣ ಬ್ಯೂರೋ, ಆಪರೇಶನ್ ಮೆಡ್ ಮ್ಯಾಕ್ಸ್ ಹೆಸರಲ್ಲಿ ಕಾರ್ಯನಿರ್ವಹಿಸುತ್ತಿದ್ದ, ಅತ್ಯಾಧುನಿಕ ಮಾದಕ ವಸ್ತು ಜಾಲವನ್ನು ಬಯಲಿಗೆಳೆದಿದೆ. ಉಡುಪಿ ಸೇರಿ, ದೇಶದ 4 ನಗರಗಳಲ್ಲಿ ಕಾರ್ಯಾಚರಣೆ ನಡೆದಿದೆ. ತನಿಖೆ ವೇಳೆ ಉಡುಪಿಯಲ್ಲಿ, ತಮಿಳುನಾಡು ಮೂಲದ ವ್ಯಕ್ತಿಯೋರ್ವ ಕಾಲ್ ಸೆಂಟರ್ ಮೂಲಕ ಕಾರ್ಯನಿರ್ವಹಿಸುತ್ತಿರುವುದು ಪತ್ತೆಯಾಗಿದೆ. ಉಡುಪಿಯಿಂದ ಈ ನೆಟ್ ವರ್ಕ್‌ನಲ್ಲಿ ಕಾರ್ಯ ನಿರ್ವಹಿಸುತ್ತಿದ್ದವರಿಗೆ, ಇದೊಂದು ಡ್ರಗ್ಸ್ ಜಾಲವೆಂಬ ಅರಿವೂ ಸಹ ಇರಲಿಲ್ಲ ಎಂಬುವುದು, ತನಿಖೆ ವೇಳೆ ತಿಳಿದುಬಂದಿದೆ. ಕೇಂದ್ರ ಗೃಹ ಖಾತೆ ಸಚಿವ ಅಮಿತ್ ಶಾ, ಭಾರತೀಯ ಮಾದಕ ದ್ರವ್ಯ ನಿಯಂತ್ರಣ ಬ್ಯೂರೋವನ್ನು, ಅಭಿನಂದಿಸಿದ್ದಾರೆ.

<><><>

ಮಾದಕ ವಸ್ತುಗಳ ಬಳಕೆಯಿಂದ ಯುವಕರು ದೂರವಿರಬೇಕು ಹಾಗೂ ವ್ಯಸನಿಗಳಾಗದಂತೆ ಸ್ವಯಂ ಜಾಗರೂಕತೆ ವಹಿಸಬೇಕು ಎಂದು ಬೀದರ್ ಜಿಲ್ಲಾ ಅಬಕಾರಿ ಉಪ ಆಯುಕ್ತರಾದ ರವಿಶಂಕರ ತಿಳಿಸಿದ್ದಾರೆ. ಬೀದರ ತೋಟಗಾರಿಕೆ ಮಹಾವಿದ್ಯಾಲಯದಲ್ಲಿ ಆಯೋಜಿಸಲಾಗಿದ್ದ, ಅಂತಾರಾಷ್ಟ್ರೀಯ ಮಾದಕ ವಸ್ತುಗಳ ಸೇವನೆ ಮತ್ತು ಕಳ್ಳ ಸಾಗಾಣೆ ವಿರೋಧಿ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

<><><>

ಮುಂಗಾರು ಹಂಗಾಮಿನ ಆರಿದ್ರಾ ಮಳೆ, ರಾಜ್ಯದ ಕರಾವಳಿ ಗುಂಟ ಬಲಗೊಂಡಿದೆ. ನಾಳೆ ಶನಿವಾರದ ವರೆಗೆ, ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. 14 ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಕರಾವಳಿ, ಮಲೆನಾಡು ಹಾಗೂ ಉತ್ತರ ಒಳನಾಡಿನ ಬಹುತೇಕ ಜಿಲ್ಲೆಗಳಲ್ಲಿ, ಬಿರುಗಾಳಿ ಸಹಿತ, ಮಳೆ ಸುರಿಯುವ ಸಾಧ್ಯತೆ ಇದೆ. ಯಾದಗಿರಿ ಜಿಲ್ಲೆಯ, ಭೀಮ ಹಾಗೂ ಕೃಷ್ಣ ನದಿ ಸೇರಿದಂತೆ, ಜಲಾಶಯಗಳ ವ್ಯಾಪ್ತಿಯಲ್ಲಿ, ಪ್ರವಾಹ ಸದೃಷ ವಾತಾವರಣವಿದ್ದು, ಜೀವಹಾನಿಯಾಗದಂತೆ, ಮುನ್ನೆಚ್ಚರಿಕೆ ವಹಿಸಲು, ಜಿಲ್ಲಾಧಿಕಾರಿ ಬಿ.ಸುಶೀಲಾ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ತುಂಗಭದ್ರಾ ಜಲಾಶಯಕ್ಕೆ ನೀರಿನ ಒಳಹರಿವು ಹೆಚ್ಚಿದ್ದು, ಇಂದಿನಿಂದ ಹೆಚ್ಚುವರಿ ನೀರನ್ನು ಹೊರ ಬಿಡಲಾಗುತ್ತಿರುವ ಹಿನ್ನೆಲೆ, ರಾಯಚೂರು ಹಾಗೂ ವಿಜಯನಗರ ಜಿಲ್ಲೆಗಳಲ್ಲಿನ ನದಿ ಪಾತ್ರದ ಜನರು ಎಚ್ಚರಿಕೆ ಪಾಲಿಸಬೇಕು ಎಂದು ಜಲಾಶಯ ಮಂಡಳಿ ಮುನ್ನೆಚ್ಚರಿಕೆ ನೀಡಿದೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.